# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯದ 15 ಜಿಲ್ಲೆಗಳ 29 ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ : 1) ಸರ್ಕಾರಿ ಆದೇಶ ಸಂಖ್ಯೆ: RD 139 CWP 1977 ದಿನಾಂಕ:23-08-1979 & MWD 147 WES 2019 ದಿನಾಂಕ:05-02-2020

2) ಸರ್ಕಾರಿ ಆದೇಶ ಸಂಖ್ಯೆ: MWD 50 WES 2021, ದಿನಾಂಕ:27.04.2021, 02-07-2021 & 26-10-2021.

3) ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು, ಇವರ ಪ್ರಸ್ತಾವನೆ.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿನ ವಕ್ಫ್ ಸಂಸ್ಥೆಗಳಿಗೆ Grant-in Aid Code ಅನ್ನು ಆಗಸ್ಟ್ 1979 ಹಾಗೂ ಫೆಬ್ರವರಿ 2020 ರಲ್ಲಿ ಜಾರಿಗೊಳಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ವಕ್ಫ್ ಸಂಸ್ಥೆಗಳ ಜೀರ್ಣೋದ್ಧಾರ ಹಾಗೂ ದುರಸ್ಥಿಗಾಗಿ 2021-22ನೇ ಸಾಲಿಗೆ ಲೆಕ್ಕಶೀರ್ಷಿಕೆ 2225-04-001-0-02(103)(ಯೋಜನೆ) ರಡಿಯಲ್ಲಿ ಸರ್ಕಾರವು ರೂ.1210.00ಲಕ್ಷಗಳ ಅನುದಾನವನ್ನು ನಿಗಧಿಪಡಿಸಿ ಮೊದಲನೇ, ಎರಡನೇ ಹಾಗೂ ಮೂರನೇ ತ್ರೈಮಾಸಿಕ ಕಂತಿನ ಅನುದಾನ ಒಟ್ಟು ರೂ. ರೂ.907.50 ಲಕ್ಷ ಮಂಜೂರು ಮಾಡಲಾಗಿದೆ.

ಮೇಲೆ (3)ರಲ್ಲಿ ಓದಲಾದ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಿಂದ ಪ್ರಸ್ತಾವನೆಗಳನ್ನು ಪಡೆಯಲಾಗಿದ್ದು, ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 02 WGA 2021,ಬೆಂಗಳೂರು,ದಿನಾಂಕ: 08-11-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2021-22ನೇ ಸಾಲಿನ ಅನುದಾನದಲ್ಲಿ ರಾಜ್ಯದ 15 ಜಿಲ್ಲೆಗಳ 29 ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಲೆಕ್ಕ ಶೀರ್ಷಿಕೆ 2225-04-001-0-02(103) ರಡಿಯಲ್ಲಿ ಒಟ್ಟು ರೂ.591.00 ಲಕ್ಷಗಳು (ಐದು ಕೋಟಿ ತೊಂಭತ್ತೊಂದು ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು ಮಂಜೂರು ಮಾಡಿದ್ದು ಅನುಬಂಧದಲ್ಲಿ ಆ ಸಂಸ್ಥೆಗಳ ಎದುರಿಗೆ ಸೂಚಿಸಲಾಗಿರುವ ಪ್ರತ್ಯೇಕ ಮೊತ್ತವನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಬಿಡುಗಡೆ ಮಾಡಲು ಆದೇಶಿಸಿದೆ.

........2

## ಷರತ್ತುಗಳು:

1. ಈ ವೆಚ್ಚವನ್ನು 2021-22ನೇ ಸಾಲಿನ ಲೆಕ್ಕ ಶೀರ್ಷಿಕೆ 2225-04-001-0-02(103) (ಯೋಜನೆ) ರಡಿಯಲ್ಲಿ ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಸಹಾಯಾನುದಾನ ಅಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.

2. ಮೇಲೆ ಓದಲಾದ (1)ರ ಆದೇಶದಂತೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯು Grant-in-Aid ನಲ್ಲಿರುವ ಸೂಚನೆಗಳನ್ನು ವಕ್ಫ್ ಸಂಸ್ಥೆಗಳಿಗೆ ಹಣ ಬಿಡುಗಡೆಗೊಳಿಸುವ ಮುನ್ನ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

3. ರೂ.5.00 ಲಕ್ಷಕ್ಕಿಂತ ಹೆಚ್ಚು ಅನುದಾನ ಮಂಜೂರು ಮಾಡಲಾಗಿರುವ ವಕ್ಫ್ ಸಂಸ್ಥೆಗಳಿಗೆ ಮೊದಲನೇ ಕಂತಿನ ರೂ.5.00 ಲಕ್ಷಗಳನ್ನು ಪ್ರಥಮ ಕಂತಿನಲ್ಲಿ ಬಿಡುಗಡೆ ಮಾಡಿ ಇನ್ನುಳಿದ ಮೊತ್ತವನ್ನು ಎರಡನೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು. 2ನೇ ಕಂತಿನ ಅನುದಾನ ಬಿಡುಗಡೆ ಮಾಡುವ ಮೊದಲು ಕಾಮಗಾರಿಯ ಪ್ರಗತಿಯನ್ನು ಕಡ್ಡಾಯವಾಗಿ ಪರಿಶೀಲಿಸಿ ಪ್ರಗತಿಯಾದಲ್ಲಿ ಮಾತ್ರ ಅನುದಾನ ಬಿಡುಗಡೆ ಮಾಡತಕ್ಕದ್ದು.

4. ರೂ.5.00ಲಕ್ಷಕ್ಕಿಂತ ಕಡಿಮೆ ಅನುದಾನ ಮಂಜೂರಾಗಿರುವ ವಕ್ಫ್ ಸಂಸ್ಥೆಗಳಿಗೆ ಅನುದಾನವನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು.

5. ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಮತ್ತು ಜಿಲ್ಲಾ ವಕ್ಫ್ ಸಲಹಾ ಸಮಿತಿಯವರು ಆದೇಶ ಹೊರಡಿಸಿದ 2 ತಿಂಗಳ ಒಳಗಾಗಿ ಸದರಿ ಎಲ್ಲಾ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡುವುದು ಸದರಿ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಹಣ ಬಿಡುಗಡೆಗೊಳಿಸಲಾಗಿದೆಯೋ ಆ ಉದ್ದೇಶಕ್ಕಾಗಿ ಬಳಕೆಯಾಗಿರುವ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಸಂಸ್ಥೆಗಳು ಕಡ್ಡಾಯವಾಗಿ ಕಳುಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ: 05.04.2021 ಹಾಗೂ 30.09.2021 ರನ್ವಯ ಸರ್ಕಾರದ ಕಾರ್ಯದರ್ಶಿಯವರಿಗೆ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮಹಿಬೂಬ ಸಾಬ)
ಸರ್ಕಾರದ ಉಪ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ.

ಗೆ:

1) ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು
2) ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.

........3

D:\Mansoora\

3) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ವಿಧಾನ ಸೌಧ, ಬೆಂಗಳೂರು.
4) ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ಇವರ ಆಪ್ತ ಸಹಾಯಕರು, ಬೆಂಗಳೂರು
6) ಮಾನ್ಯ ಹಜ್ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು
7) ಅಧ್ಯಕ್ಷರು/ವಕ್ಫ್ ಅಧಿಕಾರಿಗಳು, ಜಿಲ್ಲಾ ವಕ್ಫ್ ಸಲಹಾ ಸಮಿತಿ, ಗದಗ, ಹಾವೇರಿ, ಚಿಕ್ಕಮಗಳೂರು, ಕೊಪ್ಪಳ, ಕಲಬುರಗಿ, ತುಮಕೂರು, ಕೊಡಗು, ದಾವಣಗೆರೆ, ಧಾರವಾಡ, ಹಾಸನ, ಬೆಳಗಾವಿ, ಬಾಗಲಕೋಟೆ, ಶಿವಮೊಗ್ಗ, ಯಾದಗಿರಿ ಮತ್ತು ಬಳ್ಳಾರಿ ಜಿಲ್ಲೆಗಳು.
8) ಸಮನ್ವಯ ಅಧಿಕಾರಿ, ಅಲ್ಪಸಂಖ್ಯಾತರ ಸಹಾಯವಾಣಿ 24*7, ವಸಂತನಗರ, ಬೆಂಗಳೂರು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

~~~~~~~*********~~~~~~~

D:\Mansoora\
~~~~~~~

3) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ವಿಧಾನ ಸೌಧ, ಬೆಂಗಳೂರು.
4) ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ಇವರ ಆಪ್ತ ಸಹಾಯಕರು, ಬೆಂಗಳೂರು
6) ಮಾನ್ಯ ಹಜ್ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು
7) ಅಧ್ಯಕ್ಷರು/ವಕ್ಫ್ ಅಧಿಕಾರಿಗಳು, ಜಿಲ್ಲಾ ವಕ್ಫ್ ಸಲಹಾ ಸಮಿತಿ, ಗದಗ, ಹಾವೇರಿ, ಚಿಕ್ಕಮಗಳೂರು, ಕೊಪ್ಪಳ, ಕಲಬುರಗಿ, ತುಮಕೂರು, ಕೊಡಗು, ದಾವಣಗೆರೆ, ಧಾರವಾಡ, ಹಾಸನ, ಬೆಳಗಾವಿ, ಬಾಗಲಕೋಟೆ, ಶಿವಮೊಗ್ಗ, ಯಾದಗಿರಿ ಮತ್ತು ಬಳ್ಳಾರಿ ಜಿಲ್ಲೆಗಳು.
8) ಸಮನ್ವಯ ಅಧಿಕಾರಿ, ಅಲ್ಪಸಂಖ್ಯಾತರ ಸಹಾಯವಾಣಿ 24*7, ವಸಂತನಗರ, ಬೆಂಗಳೂರು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

~~~~~~****~~~~~~

D:\Mansoora\
~~~~~~

ಸರ್ಕಾರದ ಆದೇಶ ಸಂಖ್ಯೆ: MWD 02 WGA 2021(2),

ಬೆಂಗಳೂರು,ದಿನಾಂಕ: 08-11-2021 ಕ್ಕೆ

ಅನುಬಂಧ

## ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ

| ಕ್ರ.ಸಂ. | ಹೆಸರು ಮತ್ತು ವಿವರ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | ಅದರಪಲ್ಲಿ ಮಸೀದಿ, ಹರದಗಟ್ಟಿ ಗ್ರಾಮ, ಲಕ್ಷ್ಮೇಶ್ವರ ತಾಲೂಕು, ಗದಗ ಜಿಲ್ಲೆ. | 12.00 |
| 2 | ಮುಸ್ಲಿಂ ಜಮಾತ್ ಸುನ್ನಿ, ಹಳೇನಿಡನೇಗಿಲು ಗ್ರಾಮ, ಹಿರೇಕೆರೂರ ತಾಲೂಕು, ಹಾವೇರಿ ಜಿಲ್ಲೆ. | 25.00 |
| 3 | ಮದೀನ ಮಸ್ಜಿದ್, ಬೀರೂರಿನ ಶಾಂತಿನಗರ, ಕಡೂರು ತಾಲೂಕು, ಚಿಕ್ಕಮಗಳೂರು ಜಿಲ್ಲೆ. | 23.00 |
| 4 | ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲೂಕು, ಮೇಣದಾಳ ಗ್ರಾಮದಲ್ಲಿ ಹಾಳಾಗಿರುವ ಹಳೆಯ ಮಸೀದಿ ಪುನರ್ ನಿರ್ಮಾಣಕ್ಕೆ. | 21.00 |
| 5 | ಹುಸನಬಾಷಾ ಆಸ್ರಖಾನ ಮಸೀದಿ, ಬೂದಗುಂಪಾ ಗ್ರಾಮ ಕಾರಟಗಿ ತಾಲೂಕು ಕೊಪ್ಪಳ ಜಿಲ್ಲೆ. | 10.00 |
| 6 | ಹಜರತ್ ಕಟ್ಟಾನವಾಜ್ ದರ್ಗಾ ಮಸೀದಿ, ನಾಗೂರ ಗ್ರಾಮ, ಕಲಬುರಗಿ ತಾಲೂಕು, ಕಲಬುರಗಿ ಜಿಲ್ಲೆ. | 20.00 |
| 7 | ಜಾಮಿಯಾ ಮಸ್ಜೀದ್, ಕೊಡಿಗೇನಹಳ್ಳಿ ಗ್ರಾಮ, ಮಧುಗಿರಿ ತಾಲೂಕು, ತುಮಕೂರು ಜಿಲ್ಲೆ. | 20.00 |
| 8 | ಜಾಮಿಯಾ ಮಸೀದಿ, ಕುಶಾಲನಗರ, ಕೊಡಗು ಜಿಲ್ಲೆ | 20.00 |
| 9 | ನೂರಾನಿ ಮಸೀದಿ, ಕುಂದುರು ಗ್ರಾಮ, ಹೊನ್ನಾಳಿ ತಾಲೂಕು, ದಾವಣಗೆರೆ ಜಿಲ್ಲೆ. | 20.00 |
| 10 | ಜಾಮಿಯಾ ಮಸಿದಿ, ಕುರಹಟ್ಟಿ ಗ್ರಾಮ, ರೋಣ ತಾಲೂಕು, ಗದಗ ಜಿಲ್ಲೆ. | 20.00 |
| 11 | ಜಮಾಖಾನ ಮೊಹಲ್ಲಾ ಜಮಾತ (ಸುನ್ನಿ), ನವಲಗುಂದ, ಧಾರವಾಡ ಜಿಲ್ಲೆ. | 15.00 |
| 12 | ಟಿಪ್ಪು ಶಾದಿ ಮಹಲ್, ಚನ್ನರಾಯಪಟ್ಟಣ ಟೌನ್, ಚನ್ನರಾಯಪಟ್ಟಣ ತಾಲೂಕು, ಹಾಸನ ಜಿಲ್ಲೆ. | 15.00 |
| 13 | ನೂರಾನಿ ಮಸೀದಿ, ಬಾಗವಾನ ಚಾಲದ ಸಿಟಿ.ಎಸ್. ನಂ. 3191/ಬಿ, ಬೈಲಹೊಂಗಲ ಪಟ್ಟಣ, ಬೆಳಗಾವಿ ಜಿಲ್ಲೆ. | 20.00 |
| 14 | ಮಸ್ತಾನ ಮಸೀದಿ, ಕಾಜೀಬೀಳಗಿ ಗ್ರಾಮ, ಜಮಖಂಡಿ ತಾಲೂಕು, ಬಾಗಲಕೋಟೆ ಜಿಲ್ಲೆ. | 15.00 |
| 15 | ಸುನ್ನಿ ಹಫೀಜಿಯಾ ಮಸ್ಜಿದ್, ಅನ್ವರ್ ಕಾಲೋನಿ, ಭದ್ರಾವತಿ ಟೌನ್, ಶಿವಮೊಗ್ಗ ಜಿಲ್ಲೆ. | 15.00 |
| 16 | ಶಾದಿ ಮಹಲ್ ನಿರ್ಮಾಣಕ್ಕೆ, ಹಗರಿಬೊಮ್ಮನಹಳ್ಳಿ ಪಟ್ಟಣ, ಬಳ್ಳಾರಿ ಜಿಲ್ಲೆ. | 15.00 |
| 17 | ಹು-ಧಾ ವಾರ್ಡ್ ನಂ.59ರಲ್ಲಿ ಸದರ ಸೋಫಾದ ಜಮಾತ ಆಸ್ತಿಯಲ್ಲಿ ಮದರಸಾ ನಿರ್ಮಿಸಲು. | 15.00 |
| 18 | ಮಹ್ಮದೀಯಾ ಮಸ್ಜೀದ್, ಹೋತಪೇಠ ಗ್ರಾಮ, ಸಹಾಪೂರ ತಾಲೂಕು, ಯಾದಗಿರಿ ಜಿಲ್ಲೆ | 15.00 |
| 19 | ಜಾಮೀಯ ಮಸ್ಜೀದ್ (ಸುನ್ನಿ), ಮಿಂಚೇರಿ ಗ್ರಾಮ, ಬಳ್ಳಾರಿ ತಾಲೂಕು ಮತ್ತು ಜಿಲ್ಲೆ. | 15.00 |
| 20 | ಆಮಾತುಲ ಮುಸ್ಲಮೀನ ಬಾಗವಾನ ಮೋಹಲ್ಲಾ, ನಿಪ್ಪಾಣಿ, ಬೆಳಗಾವಿ ಜಿಲ್ಲೆ-591237 | 25.00 |
| 21 | ಬಂಗಾಲಿ ಪೀರ ದರ್ಗಾ, ಕಾರದಗಾ ಗ್ರಾಮ, ನಿಪ್ಪಾಣಿ ತಾಲೂಕು, ಬೆಳಗಾವಿ ಜಿಲ್ಲೆ | 50.00 |
| 22 | ಹಜರತ ಪೀರ್ ರಾಜಾ ನೂರಸಾ ದರ್ಗಾ, ಶಾನೂರ್‌ಬಾಬಾ ದರ್ಗಾ, ಕರೋಸಿ, ಚಿಕ್ಕೋಡಿ ತಾಲೂಕು, ಬೆಳಗಾವಿ ಜಿಲ್ಲೆ. | 35.00 |

........2

D:\Mansoora\

(ರೂ.ಲಕ್ಷಗಳಲ್ಲಿ)

| | | |
|---|---|---|
| 23 | ಅಂಜುಮನ್ ಇಸ್ಲಾಂ, ಶಿರಗುಪ್ಪಿ, ಅಥಣಿ ತಾಲೂಕು, ಬೆಳಗಾವಿ ಜಿಲ್ಲೆ | 30.00 |
| 24 | ಬೆಳಗಾವಿ ಜಿಲ್ಲೆ ಅಥಣಿ ತಾಲೂಕಿನ ಮಹಿಷವಾಡಗಿ ಗ್ರಾಮದ ಮುಸ್ಲಿಂ ಸಮಾಜದ ಮಸೀದಿ ನಿರ್ಮಾಣ ಕಾಮಗಾರಿಗಾಗಿ | 15.00 |
| 25 | ಹಜರತ ಗೈಬಿ ಸಾಹೇಬ್ ದರ್ಗಾ ಟ್ರಸ್ಟ್, ಖಡಕ್‌ಲಾಟ್, ಚಿಕ್ಕೋಡಿ ತಾಲೂಕು, ಬೆಳಗಾವಿ ಜಿಲ್ಲೆ | 50.00 |
| 26 | ಖವರೆವಾಡಿ ಪೀರ ದರ್ಗಾ ಕಮಿಟಿ, ಕೊಡಣಿ ಗ್ರಾಮ, ನಿಪ್ಪಾಣಿ ತಾಲೂಕು, ಬೆಳಗಾವಿ ಜಿಲ್ಲೆ. | 15.00 |
| 27 | ಆಮಾತುಲ್ ಮುಸ್ಲಿಂ ದರ್ಗಾ ಮೊಹಲ್ಲಾ, ನಿಪ್ಪಾಣಿ, ನಿಪ್ಪಾಣಿ ತಾಲೂಕು, ಬೆಳಗಾವಿ ಜಿಲ್ಲೆ | 25.00 |
| 28 | ತುಮಕೂರು ಜಿಲ್ಲೆ, ತಿಪಟೂರು ತಾಲೂಕು, ನೊಣವಿನಕೆರೆ ಗ್ರಾಮದ ದರ್ಗಾ ಅಭಿವೃದ್ಧಿ. | 10.00 |
| 29 | ತುಮಕೂರು ಜಿಲ್ಲೆ, ತಿಪಟೂರು ತಾಲೂಕು, ಹೊನ್ನವಳ್ಳಿ ಗ್ರಾಮದ ದರ್ಗಾ ಅಭಿವೃದ್ಧಿ. | 05.00 |
| | ಒಟ್ಟು ರೂ. | 591.00 |

(ಐದು ಕೋಟಿ ತೊಂಭತ್ತೊಂದು ಲಕ್ಷ ರೂಪಾಯಿಗಳು ಮಾತ್ರ)

(ಮಹಿಬೂಬ ಸಾಬ)
ಸರ್ಕಾರದ ಉಪ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ.